## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಸುಮಾ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಪತ್ರ ಸಂಖ್ಯೆ: ಜಿಪಂಚಿ:ಅ4:ಗ್ರಾಅಪ:334:ಗ್ರಾಪಂ:2016-17 ದಿನಾಂಕ: 01.03.2017
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 04-04-2017 ರ ಕಾರಣ ಕೇಳುವ ನೋಟೀಸ್.
3. ಕಾರಣ ಕೇಳುವ ನೋಟೀಸ್‌ಗೆ ಆಪಾದಿತ ಸದಸ್ಯರು ನೀಡಿದ ಸಮಜಾಯಿಷಿ ದಿನಾಂಕ:22-08-2015.
4. ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 08.05.2017, 16.05.2017 ಮತ್ತು 29.05.2017

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ: 01.03.2017 ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಪತ್ರದಲ್ಲಿ ಶ್ರೀಮತಿ ಸುಮಾ ಎಂ.ಡಿ. ಕೋಂ ನಾಗೇಗೌಡ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ ರವರು ಆಶ್ರಯ ವಸತಿ ಯೋಜನೆಗೆ ಸಂಬಂಧಿಸಿದ 1,61,702/- ರೂ.ಗಳನ್ನು ಸರ್ಕಾರದ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ನಿಯಮಬಾಹಿರವಾಗಿ ಸಿಬ್ಬಂದಿ ವೇತನಕ್ಕೆ ಪಾವತಿಸಿರುವುದಾಗಿ ಸದರಿಯವರು ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಅಗತ್ಯ ಕ್ರಮಕ್ಕಾಗಿ ಮು.ಕಾ.ನಿ. ಜಿ.ಪಂ, ಚಿಕ್ಕಮಂಗಳೂರು ಜಿಲ್ಲೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀಮತಿ ಸುಮಾ ಎಂ.ಡಿ. ಕೋಂ ನಾಗೇಗೌಡ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ ಇವರಿಗೆ ದಿನಾಂಕ: 04-04-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀಮತಿ ಸುಮಾ ಎಂ.ಡಿ. ಕೋಂ ನಾಗೇಗೌಡ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ ಇವರಿಗೆ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಹಾಜರಾಗಿರುತ್ತಾರೆ.

ಪ್ರಕರಣಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ಶ್ರೀಮತಿ ಸುಮಾ ಎಂ.ಡಿ. ಕೋಂ ನಾಗೇಗೌಡ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ ರವರು ನೌಕರರಿಗೆ ಸಂಬಳ ಮಾತ್ರ ನೀಡಿದ್ದಾಗಿ ಹಾಗೂ ಯಾವುದೇ ದುರುಪಯೋಗವಾಗಿರುವುದು ಕಂಡುಬಂದಿರುವುದಿಲ್ಲ. ಆ ಹಣವನ್ನು ಸಂಬಂಧಪಟ್ಟ ಖಾತೆಗೆ ಜಮಾ ಮಾಡಲು ಸೂಚಿಸಲಾಗಿತ್ತು. ಅದರಂತೆ ಗ್ರಾಮ ಪಂಚಾಯಿತಿ ಕೆ.ಆರ್.ಪೇಟೆರವರು ದಿನಾಂಕ: 29.06.2017 ರಂದು ಡಿ.ಡಿ.ಮೂಲಕ ಸಂಖ್ಯೆ:955907010 ರಾಜೀವ ಗಾಂಧಿ ವಸತಿ ನಿಗಮಕ್ಕೆ ದಿನಾಂಕ:03.07.2017 ರಂದು ಮುಟ್ಟಿಸಿರುವ ಹಿನ್ನಲೆಯಲ್ಲಿ ಹಾಗೂ ಇನ್ನು ಮುಂದೆ ಈ ರೀತಿ ಮಾಡದಿರಲು ಎಚ್ಚರಿಕೆ ನೀಡಲು ನಿರ್ಣಯಿಸಿ ಪ್ರಕರಣವನ್ನು ಕೈಬಿಡಲಾಗಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/373/ಗ್ರಾಪಂಅ/2017</u>**
**<u>ಬೆಂಗಳೂರು, ದಿನಾಂಕ: 17-10-2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಸುಮಾ ಎಂ.ಡಿ. ಕೋಂ ನಾಗೇಗೌಡ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ ರವರಿಗೆ ಸಿಬ್ಬಂದಿ ವೇತನಕ್ಕೆ ಬಳಿಸಿಕೊಂಡ ಹಣವನ್ನು ಸಂಬಂಧಪಟ್ಟ ಖಾತೆಗೆ ಜಮಾ ಮಾಡಿರುವುದರಿಂದ ಇನ್ನು ಮುಂದೆ ಈ ರೀತಿ ಮಾಡದಿರಲು ಎಚ್ಚರಿಕೆ ನೀಡಿ ಪ್ರಕರಣವನ್ನು ಕೈಬಿಡಲಾಗಿದೆ ಎಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಪ್ರತಿಗಳು:</u>**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ.
3) ಶ್ರೀಮತಿ ಸುಮಾ ಎಂ.ಡಿ. ಕೋಂ ನಾಗೇಗೌಡ, ಅಧ್ಯಕ್ಷರು ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ.
4) ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೆ.ಆರ್.ಪೇಟೆ ಗ್ರಾಮ ಪಂಚಾಯಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
6) ಗಣಕ ಕೋಶ